ಕೋಲಾರ ಜಿಲ್ಲೆಯಲ್ಲಿ ಕೈಗಾರಿಕೆಗಳ ಸ್ಥಾಪನೆ.

1706(2370)

ಶ್ರೀ ಸಂಪಂಗಿ ಎನ್.(ಬಾಗೇಪಲ್ಲಿ): ಮಾನ್ಯ ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆ ಬಾಗೇಪಲ್ಲಿ ಹಾಗೂ ಗುಡಿಬಂಡೆ ತಾಲ್ಲೂಕುಗಳಲ್ಲಿ ವಾಣಿಜ್ಯೋದ್ಯಮಿಗಳು ಕಾರ್ಖಾನೆಗಳನ್ನು ಸ್ಥಾಪಿಸಲು ಸರ್ಕಾರಕ್ಕೆ ಪ್ರಸ್ತಾವನೆಯಲ್ಲಿ ಸಲ್ಲಿಸಿದ್ದಾರೆಯೇ;

ಆ) ಹಾಗಿದ್ದರೆ ಯಾವ ಯಾವ ವಾಣಿಜ್ಯೋದ್ಯಮಿಗಳು ಯಾವ ಯಾವ ಕಾರ್ಖಾನೆಯನ್ನು ಸ್ಥಾಪಿಸಲು ಬಯಸಿ ಅರ್ಜಿಯನ್ನು ಸಲ್ಲಿಸಿದ್ದಾರೆ. (ವಿವರ ನೀಡುವುದು)

ಇ) ಹಾಗಿದ್ದಲ್ಲಿ ಅಧಿಕವಾಗಿರುವ ಬಡ ವಿದ್ಯಾವಂತ ನಿರುದ್ಯೋಗಿಗಳಿಗೆ ನೇಮಕಾತಿಯಲ್ಲಿ ಮೊದಲು ಆದ್ಯತೆ ನೀಡಲಾಗುವುದೇ;

ಈ) ಕಾರ್ಖಾನೆ ಸ್ಥಾಪನೆಗೆ ವಾಣಿಜ್ಯೋದ್ಯಮಿಗಳಿಗೆ ಅನುಮತಿ ಹಾಗೂ ಬಡ ವಿದ್ಯಾವಂತ ನಿರುದ್ಯೋಗಿಗಳಿಗೆ ಎಂದಿನಿಂದ ಉದ್ಯೋಗ ಒದಗಿಸಲಾಗುವುದು?

ಶ್ರೀ ಆರ್.ವಿ.ದೇಶಪಾಂಡೆ (ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) ವಾಣಿಜ್ಯೋದ್ಯಮಿಗಳು ಇದುವರೆವಿಗೂ ಯಾವುದೇ ಬೃಹತ್ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳನ್ನು ಗುಡಿಬಂಡೆ ಮತ್ತು ಬಾಗೇಪಲ್ಲಿ ತಾಲ್ಲೂಕುಗಳಲ್ಲಿ ಸ್ಥಾಪಿಸಲು ಯಾವುದೇ ಪ್ರಸ್ತಾವನೆಯನ್ನು ಸಲ್ಲಿಸಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ

ಇ) ಅನ್ವಯಿಸುವುದಿಲ್ಲ

ಈ) ಕಾರ್ಖಾನೆಗಳ ಸ್ಥಾಪನೆಗಾಗಿ ವಾಣಿಜ್ಯೋದ್ಯಮಿಗಳು ಪ್ರಸ್ತಾವನೆಗಳನ್ನು ಸಲ್ಲಿಸಿದಾಗ, ಅವುಗಳನ್ನು ತಕ್ಷಣವೇ ಪರಿಶೀಲಿಸಿ ಅನುಮೋದಿಸಲಾಗುವುದು. ಇಂತಹ ಕೈಗಾರಿಕೆಗಳು ಸ್ಥಾಪನೆಯಾದರೆ ಸ್ಥಳೀಯ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ದೊರಕುವುದು.